ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	681
ಸದಸ್ಯರ ಹೆಸರು	:	ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	12-03-2020
ಉತ್ತರಿಸಬೇಕಾದ ಸಚಿವರು	:	ಮಾನ್ಯ ಮುಖ್ಯಮಂತ್ರಿಗಳು

****

ಕ್ರ. ಸಂ.	ಪ್ರಶ್ನೆ	ಉತ್ತರ
ಅ	ಬೆಂಗಳೂರು ನಗರಕ್ಕೆ 2030 ನೇ ಇಸವಿಯ ಅಂತ್ಯಕ್ಕೆ ಬೇಕಾಗಬಹುದಾದ ಕುಡಿಯುವ ನೀರಿನ ಅಂದಾಜನ್ನು ಮಾಡಲಾಗಿದೆಯೇ; ಇದ್ದಲ್ಲಿ ಎಷ್ಟು ನೀರು ಬೇಕಾಗಬಹುದು; (ವಿವರ ನೀಡುವುದು)	ಪ್ರಸ್ತುತ ಬೆಂಗಳೂರು ನಗರಕ್ಕೆ 1450 ಎಂ.ಎಲ್.ಡಿ ನೀರು ಸರಬರಾಜು ಆಗುತ್ತಿದ್ದು, ತಜ್ಞರ ಸಮಿತಿಯ ವರದಿಯ ಪ್ರಕಾರ 2031ರ ವರ್ಷಾಂತ್ಯಕ್ಕೆ ಬೆಂಗಳೂರು ನಗರದ ನೀರಿನ ಬೇಡಿಕೆಯು 2714 ಎಂ.ಎಲ್.ಡಿ ಎಂದು ಅಂದಾಜು ಮಾಡಲಾಗಿದೆ. ಹೆಚ್ಚುವರಿಯಾಗಿ 110 ಹಳ್ಳಿಗಳಿಗೆ 2033 ರವರೆಗೆ ನೀರು ಸರಬರಾಜು ಮಾಡಲು ಸರ್ಕಾರದಿಂದ ಹೆಚ್ಚುವರಿ 10 ಟಿ.ಎಂ.ಸಿ ನೀರನ್ನು ಹಂಚಿಕೆ ಮಾಡಲಾಗಿದೆ. ಇದನ್ನು ಕಾವೇರಿ 5ನೇ ಹಂತದ ಯೋಜನೆ ಅಡಿಯಲ್ಲಿ 775 ಎಂ.ಎಲ್.ಡಿ ನೀರನ್ನು ಬೆಂಗಳೂರಿಗೆ ಸರಬರಾಜು ಮಾಡಲು ಈ ಯೋಜನೆ ಪ್ರಗತಿಯಲ್ಲಿದ್ದು, 2023 ರಲ್ಲಿ ಪೂರ್ಣಗೊಳ್ಳಲಿದೆ. ಇದಲ್ಲದೆ. ಎತ್ತಿನಹೊಳೆ ಯೋಜನೆಯಿಂದ ಸರ್ಕಾರವು 2.5 ಟಿಎಂಸಿ ನೀರು ಹಂಚಿಕೆ ಮಾಡಿದ್ದು ಬೆಂಗಳೂರು ಜಲಮಂಡಳಿ ವತಿಯಿಂದ ತಿಪ್ಪಗೊಂಡನಹಳ್ಳಿ ಜಲಾಶಯವನ್ನು ಪುನಃಶ್ಚೇತನಗೊಳಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಇದರಿಂದ ಬೆಂಗಳೂರಿಗೆ ಹೆಚ್ಚುವರಿಯಾಗಿ 110 ಎಂಎಲ್‌ಡಿ ನೀರು ಸರಬರಾಜು ಆಗಲಿದೆ ಹಾಗೂ ಈ ಯೋಜನೆ 2021 ಡಿಸೆಂಬರ್‌ನಲ್ಲಿ ಪೂರ್ಣಗೊಳ್ಳತ್ತದೆ. ಉಳಿದ 0.8 ಟಿ.ಎಂ.ಸಿ ನೀರನ್ನು ಹೆಸರುಘಟ್ಟ ಪುನಃಶ್ಚೇತನ ಯೋಜನೆ ಅಡಿಯಲ್ಲಿ ಎರಡನೇ ಘಟ್ಟದಲ್ಲಿ ಬೆಂಗಳೂರು ಜಲಮಂಡಳಿಯಿಂದ ಕೈಗೆತ್ತಿಕೊಳ್ಳಲಾಗುವುದು.
ಆ	ಬೆಂಗಳೂರು ನಗರಕ್ಕೆ ನೀರನ್ನು ಒದಗಿಸಲು ಸರ್ಕಾರ ತೆಗೆದು ಕೊಂಡಿರುವ ದೀರ್ಘಾವಧಿಯ ಯೋಜನೆಗಳು ಯಾವುವು; (ವಿವರ ನೀಡುವುದು)	ದೀರ್ಘಾವಧಿ ಯೋಜನೆಯಾಗಿ ಬೆಂಗಳೂರು ನಗರಕ್ಕೆ ನೀರನ್ನು ಒದಗಿಸಲು ಪರ್ಯಾಯ ಮೂಲವಾಗಿ ಶರಾವತಿ ನದಿಯ ನೀರನ್ನು ಲಿಂಗನಮಕ್ಕಿ ಅಣೆಕಟ್ಟಿನಿಂದ ಬೆಂಗಳೂರು ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡಲು ಹಾಗೂ ಮೇಕೆದಾಟಿನಿಂದ ಬೆಂಗಳೂರು ನಗರಕ್ಕೆ ನೀರು ಸರಬರಾಜು ಮಾಡುವ ಯೋಜನೆಗಳು ಇರುತ್ತವೆ.
ಇ	ಬೆಂಗಳೂರು ನಗರದಲ್ಲಿ ಮಳೆ ನೀರನ್ನು ಉಳಿಸಲು ಇರುವ ಯೋಜನೆಗಳು ಏನು? (ವಿವರ ನೀಡುವುದು)	ಬೆಂಗಳೂರು ನಗರದಲ್ಲಿರುವ ಕಟ್ಟಡಗಳಿಗೆ ಮಳೆ ನೀರು ಕೊಯ್ಲು ಪದ್ಧತಿ ಅಳವಡಿಸಿಕೊಳ್ಳಲು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬರುವ 60'x40' ಚದರ ಅಡಿ ಹಾಗೂ ಅದಕ್ಕಿಂತ ಮೇಲ್ಪಟ್ಟು ವಿಸ್ತೀರ್ಣವುಳ್ಳ ನಿವೇಶನದಲ್ಲಿ ಈಗಾಗಲೇ ಕಟ್ಟಡವನ್ನು ನಿರ್ಮಿಸಿದವರಿಗೆ ಮತ್ತು ಹೊಸದಾಗಿ ಕಟ್ಟಡವನ್ನು 30'x40' ಹಾಗೂ ಅದಕ್ಕಿಂತ ಮೇಲ್ಪಟ್ಟು ವಿಸ್ತೀರ್ಣದಲ್ಲಿ ನಿರ್ಮಿಸಿದ್ದರೆ ಕಡ್ಡಾಯವಾಗಿ ಮಳೆ ನೀರು ಕೊಯ್ಲು ಅಳವಡಿಸಬೇಕೆಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಕಾಯ್ದೆ, 1964ರ ಸೆಕ್ಷನ್ 72(ಎ)ಗೆ ಆಗಸ್ಟ್ 2009 ರಲ್ಲಿ ತಿದ್ದುಪಡಿ ತರಲಾಗಿರುತ್ತದೆ.

		ಮಳೆ ನೀರು ಕೊಯ್ಲು ಪದ್ಧತಿ ಅಳವಡಿಕೆ ಮತ್ತು ನೀರಿನ ಸಂರಕ್ಷಣೆ ಬಗ್ಗೆ ಅರಿವು ಮೂಡಿಸುವುದು ಮಳೆನೀರು ಕೊಯ್ಲು ಪದ್ಧತಿಯನ್ನು ಅಳವಡಿಸಿಕೊಳ್ಳಲು ಸಾರ್ವಜನಿಕರಿಗೆ ಎಲ್ಲಾ ತಾಂತ್ರಿಕ ಮಾಹಿತಿಯನ್ನು ನೀಡುವ ಸಲುವಾಗಿ ಸರ್.ಎಂ. ವಿಶ್ವೇಶ್ವರಯ್ಯ ಮಳೆನೀರು ಸುಗ್ಗಿ ಕೇಂದ್ರ ಮತ್ತು ಸಹಾಯವಾಣಿಯನ್ನು ದಿನಾಂಕ:21/03/2011 ರಂದು ಪ್ರಾರಂಭಿಸಲಾಗಿದ್ದು, ಸದರಿ ಕೇಂದ್ರಕ್ಕೆ ಬರುವ ಸಾರ್ವಜನಿಕರಿಗೆ ನುರಿತ ಅಭಿಯಂತರರಿಂದ ಮಳೆ ನೀರು ಕೊಯ್ಲು ಹಾಗೂ ನೀರಿನ ಮಿತ ಬಳಕೆ ಬಗ್ಗೆ ನಿರಂತರವಾಗಿ ಮಾಹಿತಿಯನ್ನು ನೀಡಲಾಗುತ್ತಿದೆ. ಈ ಕೇಂದ್ರದಲ್ಲಿ 26 ಬಗೆಯ ಮಳೆನೀರು ಕೊಯ್ಲು ಪದ್ಧತಿಯ ಮಾದರಿಗಳನ್ನು ಅಳವಡಿಸಲಾಗಿದೆ. ಸುಗ್ಗಿ ಕೇಂದ್ರದ ಆವರಣದಲ್ಲಿ ನೀರಿನ ಸದ್ಬಳಕೆ ಮಹತ್ವ ಮತ್ತು ಸಂಸ್ಕರಿಸಿದ ತ್ಯಾಜ್ಯನೀರನ್ನು ಮರು ಬಳಕೆಯ ಬಗ್ಗೆ ಮಾಹಿತಿಯನ್ನು ನಿರಂತರವಾಗಿ ನೀಡಲಾಗುತ್ತಿದೆ. ಈ ಕೇಂದ್ರದ ಮೊದಲನೆಯ ಮಹಡಿಯಲ್ಲಿ 72 ಆಸನಗಳುಳ್ಳ ಸಭಾಂಗಣವಿದ್ದು, ಇದರಲ್ಲಿ ಪ್ರಮುಖವಾಗಿ ಸಾರ್ವಜನಿಕರು, ಶಾಲಾ ಮಕ್ಕಳು, ಗಣ್ಯರು, ರಾಜ್ಯ ಮತ್ತು ಅಂತರರಾಜ್ಯ ಹಾಗೂ ವಿದೇಶಗಳಿಂದ ಮತ್ತು ಸಂಘ ಸಂಸ್ಥೆಗಳಿಂದಲೂ ಬರುವವರಿಗೆ ಮಳೆನೀರು ಕೊಯ್ಲುವಿನ ಬಗ್ಗೆ ಮತ್ತು ನೀರಿನ ಸದ್ಬಳಕೆ ಮಹತ್ವದ ಬಗ್ಗೆ ಕಿರುಚಿತ್ರದ ಮುಖಾಂತರ ಮಾಹಿತಿಯನ್ನು ನೀಡಲಾಗುತ್ತಿದೆ. ಇದರ ಜೊತೆಗೆ ಮಳೆನೀರು ಕೊಯ್ಲು ಪದ್ಧತಿಯನ್ನು ಅಳವಡಿಸಿಕೊಳ್ಳಲು ಸಾರ್ವಜನಿಕರಿಗೆ ಎಲ್ಲಾ ಮಾಹಿತಿಯನ್ನು ತಲುಪಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಯ (ಭಾರತೀಯ ವಿಜ್ಞಾನ ಮಂದಿರ ಆವರಣದಲ್ಲಿದ್ದು) ವತಿಯಿಂದ ಮಳೆನೀರು ಕೊಯ್ಲು ಪದ್ಧತಿಯನ್ನು ಅಳವಡಿಸಲು ಎಲ್ಲಾ ತಾಂತ್ರಿಕ ಮಾಹಿತಿಯನ್ನು ಸಾರ್ವಜನಿಕರಿಗೆ ನೀಡುವ ಸಲುವಾಗಿ ಸಹಾಯವಾಣಿಯನ್ನು ಸ್ಥಾಪಿಸಲಾಗಿರುತ್ತದೆ. ಬೆಂಗಳೂರು ಜಲಮಂಡಳಿಯು ಮಳೆನೀರು ಕೊಯ್ಲು ಪದ್ಧತಿಯ ಬಗ್ಗೆ ಬೆಂಗಳೂರಿನಾದ್ಯಾಂತ ಆಯಾ ಪ್ರದೇಶದ ಶಾಸಕರು, ಚುನಾಯಿತ ಪ್ರತಿನಿಧಿಗಳು ಮತ್ತು ಸಾರ್ವಜನಿಕರ ಸಹಕಾರದೊಂದಿಗೆ ಸುಮಾರು 40 ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಂಡು ನುರಿತ ತಜ್ಞರೊಂದಿಗೆ ಮಾಹಿತಿಯನ್ನು ನೀಡುವುದರ ಜೊತೆಗೆ ಇದಕ್ಕೆ ಸಂಬಂಧಪಟ್ಟ ಭಿತ್ತಿ ಪತ್ರಗಳನ್ನು ಸಹ ವಿತರಿಸಿ ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಲಾಗಿದೆ.

ಸಂಖ್ಯೆ: ನಅಇ 22 ಎಂಎನ್‌ಐ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ.